# ಮೈಸೂರ ಗೆಜೆಟ್.

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಏಪ್ರಿಲ್ ತಾ॥ 25, ಸ॥ 1885.

"ಪಬ್ಲಿ" ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

## ೨ನೇ ಭಾಗ.

ಇಂಡ್ಯಗವರ್ನ್‌ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರುವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಮೈಸೂರು ರೆವಿನ್ಯೂ ಸರ್ವೇ ಮತ್ತು ಸೆಟಲ್‌ಮೆಂಟ್ ಇಲಾಖಾ.

ಇಸ್ತಿಹಾರ್‌ನಾಮೆ.

ನಂಬರ್ 19. ತಾರೀಖು 13ನೇ ಮೂಹಿ ಏಪ್ರಿಲ್ 1885.

ಇವರಿಂದ ಸಮಸ್ತ ಜನಗಳಿಗೂ ತಿಳಿಯುವ ಬಗ್ಯೆ ಪ್ರಕಟಿಸಲ್ಪಡುವದೇನಂದರೆ, ಈಳೆದ ಆಗಸ್ಟ್ ತಿಂಗಳ 16ನೇ ತಾರೀಖಿನ ಮೈಸೂರು ಗವರ್ನ್‌ಮೆಂಟ್ ಗೆಜಿಟ್ಟಿನಲ್ಲಿ ಘಾಯಿಷ್ ಮಾಡಲ್ಪಟ್ಟ ಸೂಚನಾ ಪತ್ರಿಕೆ ಪ್ರಕಾರವೆ ಕೋಲಾರ ಡಿಸ್ಟ್ರಿಕ್ಟು ಬಾಗೇಪಲ್ಲಿ ತಾಲ್ಲೂಕಿನ ರಿವಿನ್ಯೂ ಸರ್ವೆ ಜವಾಬಂದಿಯು ಬರುವ ಮೇ ತಿಂಗಳ ಗುರ್ವೇ ತಾರೀಖಿಗೆ ಯಾ ಆ ಸುಮಾರಿಗೆ ಪ್ರಾರಂಭಿಸಲ್ಪಡುತ್ತೆ.

ಜೆ. ಪಿ. ಗ್ರಾಂಟ್,
ಸೂಪರ್‌ಟೆಂಡೆಂಟ್, ರೆವಿನ್ಯೂ ಸರ್ವೆ ವ ಸೆಟಲ್ಮೆಂಟ್.

ಫಿನಾನ್ಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಷರಾ ಬರೆಯಲ್ಪಟ್ಟಬಹುದಾದಂತಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕೌಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವೆರುಗಳೊಪನೆ ಮೈಸೂರು ಗವರ್ನ್‌ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಷೇಸ್‌ಮೆಂಟ್ ಯಾನೇ ಷರಾ ಬಗ್ಯೆ ಇದರಡಿ ರುಜು ಮಾಡಿರುವರೆ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿಮಾಂಡ್ ಡ್ರಾಫ್ಟ್‌ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಷೇಸ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡಿರ್ನ್,
ಕಾಂಪ್ಟ್ರೋಲರ್.